# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 786
ಸದಸ್ಯರ ಹೆಸರು : ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ : 17-09-2021.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕು, ಕುದೂರು ಹೋಬಳಿ, ಬಿಸ್ಕೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 2016-2017ನೇ ಸಾಲಿನಲ್ಲಿ ಗಾಂಧಿ ಗ್ರಾಮ ಪುರಸ್ಕಾರ ಯೋಜನೆಯಡಿ ಕೋಡಿಹಳ್ಳಿ ಕಾಲೋನಿ ಗ್ರಾಮದಲ್ಲಿ ಗ್ರಾಮ/ಗೌರವ ಯೋಜನೆಯಡಿ ಸ್ನಾನ ಗೃಹ ಮತ್ತು ಶೌಚಾಲಯ ಕಾಮಗಾರಿಗಾಗಿ ಬಿಡುಗಡೆಯಾದ ಮೊತ್ತ ರೂ.50,000/-ಗಳು, 14ನೇ ಹಣಕಾಸು ಯೋಜನೆಯಡಿ 2017-2018ನೇ ಸಾಲಿನಲ್ಲಿ ಕೋಡಿಹಳ್ಳಿ ಕಾಲೋನಿ, ಸರ್ಕಾರಿ ಕಿರಿಯ ಪ್ರೌಢಶಾಲೆಯ ಹತ್ತಿರ ಅಂಗವಿಕಲ ಸ್ನೇಹಿ ಶೌಚಾಲಯ ನಿರ್ಮಾಣಕ್ಕಾಗಿ ಬಿಡುಗಡೆಯಾದ ಮೊತ್ತ ರೂ.34,165/-ಗಳು, ಬಿಸ್ಕೂರು ಕಿರಿಯ ಪ್ರೌಢಶಾಲೆಯ ಹತ್ತಿರ ಅಂಗನವಾಡಿ ಸ್ನೇಹಿ ಶೌಚಾಲಯ ನಿರ್ಮಾಣಕ್ಕಾಗಿ ಬಿಡುಗಡೆಯಾದ ಮೊತ್ತ ರೂ.30,099/-ಗಳು ಹಾಗೂ ಇದೇ ಹಣಕಾಸು ಸಾಲಿನಲ್ಲಿ ಮುತ್ತಸಾಗರ ಸರ್ಕಾರಿ ಕಿರಿಯ ಪ್ರೌಢಶಾಲೆ, ಅಂಗವಿಕಲ ಸ್ನೇಹಿ ಶೌಚಾಲಯ ನಿರ್ಮಾಣಕ್ಕಾಗಿ ಬಿಡುಗಡೆಯಾದ ಮೊತ್ತ ರೂ.25,000/-ಗಳು ಸೇರಿದಂತೆ ಒಟ್ಟು ಬಿಡುಗಡೆಯಾದ ರೂ.1,39,262/-ಗಳ ಕಾಮಗಾರಿಗಳನ್ನು ಮಾಡದೇ ಸಂಬಂಧಪಟ್ಟ ನೋಡಲ್ ಅಧಿಕಾರಿ, ಪಂ.ಅ.ಅ. ಮತ್ತು ಅಧ್ಯಕ್ಷರುಗಳು ಶಾಮೀಲಾಗಿ ಸರ್ಕಾರದ ಬೊಕ್ಕಸಕ್ಕೆ ನಷ್ಟವನ್ನುಂಟು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಬಂದಿದ್ದಲ್ಲಿ, ಸದರಿಯವರುಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರವಾದ ಮಾಹಿತಿ ಒದಗಿಸುವುದು) | ಈ ಅವಧಿಯಲ್ಲಿ ಬಿಸ್ಕೂರು ಗ್ರಾಮ ಪಂಚಾಯತಿಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಶ್ರೀ ಸತೀಶ್ ಆರ್.ಎನ್. ರವರು ಇಂತಹ ಕರ್ತವ್ಯ ಲೋಪವೆಸಗಿರುವುದು ಕಂಡು ಬಂದಿದ್ದು, ರಾಮನಗರ ಜಿಲ್ಲಾ ಪಂಚಾಯತಿ ಆದೇಶ ಸಂಖ್ಯೆ:ರಾಜಿಪಂ/ಸಿ2/ಸಿಆರ್-52/ಬಿಸ್ಕೂರು ಗ್ರಾಪಂ/2020-21, ದಿನಾಂಕ: 16-10-2020 ರನ್ವಯ ಸದರಿ ನೌಕರರನ್ನು ಅಮಾನತ್ತುಗೊಳಿಸಿದ್ದು, ಪ್ರಸ್ತುತ ಇಲಾಖಾ ವಿಚಾರಣೆ ಪ್ರಗತಿಯಲ್ಲಿದೆ. |

ಸಂ. ಗ್ರಾಅಪ 334 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.